# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 964 |
| ವಿಧಾನ ಸಭೆಯ ಸದಸ್ಯರ ಹೆಸರು | ಶ್ರೀ ಎಸ್. ಆರ್. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.12.2018 |
| ಉತ್ತರಿಸುವವರು | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |
| ವಿಷಯ | ಬಾಗಲಕೋಟೆಯಲ್ಲಿ ತಾರಾಲಯದ ಬಗ್ಗೆ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆಯಲ್ಲಿ ತಾರಾಲಯ (ಪ್ಲಾನಿಟೋರಿಯಂ) ನಿರ್ಮಿಸುವ ಕಾರ್ಯ ಯಾವ ಹಂತದಲ್ಲಿದೆ; ಇದರ ನಿರ್ಮಾಣ ವಿಳಂಭ ವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಾಗಲಕೋಟೆಯಲ್ಲಿ ತಾರಾಲಯ ಸ್ಥಾಪನೆಗೆ ಅಗತ್ಯವಿರುವ ವಾಸ್ತುವಿನ್ಯಾಸ ಕಾರ್ಯ ಪೂರ್ಣಗೊಂಡಿದ್ದು, ಟೆಂಡರ್ ಪ್ರಕ್ರಿಯೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಸದರಿ ಯೋಜನೆಯನ್ನು ಬಾಗಲಕೋಟೆ ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರ ಸೊಸೈಟಿಯ ಮುಖಾಂತರ ಸ್ಥಾಪಿಸಲು ಈ ಹಿಂದೆ ಕ್ರಮಕೈಗೊಳ್ಳಲಾಗುತ್ತಿತ್ತು. ಆದರೆ, ಯೋಜನೆಯಲ್ಲಿ ವಿಳಂಭವಾಗುತ್ತಿರುವುದನ್ನು ಗಮನಿಸಿ, ಸರ್ಕಾರವು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿಯ ಮೂಲಕ ಸದರಿ ಯೋಜನೆಯನ್ನು ನಿರ್ಮಾಣ ಮಾಡಲು ಕ್ರಮಕೈಗೊಳ್ಳಲಾಗಿದೆ. |
| ಆ) | ಬಂದಿದ್ದಲ್ಲಿ, ಯಾವಾಗ ನಿರ್ಮಾಣ ಪೂರೈಸಲಾಗುವುದು? | ಸದರಿ ಯೋಜನೆಯ ನಿರ್ಮಾಣವನ್ನು ಮುಂದಿನ 18 ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು. |

ಸಂಖ್ಯೆ: ವಿಯಇ 293 ವಿತ್ರಮ 2018

(ಕೆ.ಜೆ. ಜಾರ್ಜ್)
ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.